ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

---

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಸೆಪ್ಟೆಂಬರ್ 27 , 2014

ಪತ್ರಿಕಾ ಪ್ರಕಟಣೆ

## ಗಾಂಧಿ ಜಯಂತಿಯಂದು 160 ಗ್ರಾಮ ಪಂಚಾಯಿತಿಗಳಿಗೆ ಗಾಂಧಿ ಗ್ರಾಮ ಪುರಸ್ಕಾರ ಪ್ರದಾನ

ಬೆಂಗಳೂರು, ಸೆಪ್ಟೆಂಬರ್ 27 (ಕರ್ನಾಟಕ ವಾರ್ತೆ) :

ಗಾಂಧಿ ಜಯಂತಿ ದಿನದ ಪ್ರಯುಕ್ತ ಅಕ್ಟೋಬರ್ 2 ರಂದು ರಾಜ್ಯದ 160 ಗ್ರಾಮ ಪಂಚಾಯಿತಿಗಳಿಗೆ ಗಾಂಧಿ ಗ್ರಾಮ ಪುರಸ್ಕಾರಗಳನ್ನು ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ವಿಧಾನ ಸೌಧದ ಔತಣ ಸಭಾಂಗಣದಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ ಪ್ರದಾನ ಮಾಡಲಿದ್ದಾರೆ. ಅಲ್ಲದೆ, ಈ ಸಂದರ್ಭದಲ್ಲಿಯೇ ರಾಜೀವ್ ಗಾಂಧಿ ಪಂಚಾಯಿತ್ ಸಶಕ್ತೀಕರಣ ಪ್ರೋತ್ಸಾಹ ಧನವನ್ನೂ ವಿತರಿಸಲಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಸಚಿವ ಶ್ರೀ ಹೆಚ್. ಕೆ. ಪಾಟೀಲ್ ಅವರು ಇಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ಈ ಪ್ರೋತ್ಸಾಹ ಧನದ ಒಟ್ಟು ಮೊತ್ತ 12.78 ಕೋಟಿ ರೂ ಆಗಿದೆ. ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತ್‌ಗಳಲ್ಲಿ ಉತ್ತಮ ನೈರ್ಮಲ್ಯ ನಿರ್ವಹಣೆಗಾಗಿ ತಲಾ ಒಂದು ಕೋಟಿ ರೂ ಪ್ರೋತ್ಸಾಹ ಧನವನ್ನೂ ಇದೇ ಸಂದರ್ಭದಲ್ಲಿ ವಿತರಣೆ ಮಾಡಲಾಗುವುದು ಎಂದು ಅವರು ಹೇಳಿದರು.

ರಾಜ್ಯವನ್ನು ಸಂಪೂರ್ಣವಾಗಿ ಬಯಲು ಬಹಿರ್ದಶೆ ಮುಕ್ತವಾಗಿಸಲು ಶೌಚಾಲಯಕ್ಕಾಗಿ ಸಮರ ಆಂದೋಲನವನ್ನು ಪ್ರಾರಂಭಿಸಲಾಗಿದೆ. ಗಾಂಧಿ ಜಯಂತಿಯ ಅಂಗವಾಗಿ ರಾಜ್ಯದ 100 ಜನವಸತಿಗಳನ್ನು ಬಯಲು ಬಹಿರ್ದಶೆ ಮುಕ್ತ ಎಂದು ಘೋಷಿಸಲಾಗುವುದು. ಈ ಎಲ್ಲಾ ಗ್ರಾಮಗಳಲ್ಲಿ ಶೇಕಡಾ 100 ರಷ್ಟು ಕುಟುಂಬಗಳು ಶೌಚಾಲಯವನ್ನು ಹೊಂದಿರುತ್ತವೆ. ಮುಂದಿನ ಗಣರಾಜ್ಯೋತ್ಸವ ದಿನಾಚರಣೆ ಜನವರಿ 26 ರಂದು ಒಂದು ಸಾವಿರ ಜನ ವಸತಿ ಪ್ರದೇಶಗಳಲ್ಲಿ ಶೇಕಡಾ 100 ರಷ್ಟು ಬಯಲು ಬಹಿರ್ದಶೆ ಮುಕ್ತ ಗ್ರಾಮಗಳನ್ನಾಗಿ ಘೋಷಿಸಲು ಉದ್ದೇಶಿಸಲಾಗಿದೆ. ಅದೇ ವರ್ಷ ಸ್ವಾತಂತ್ರ್ಯೋತ್ಸವ ದಿನಾಚರಣೆ ಆಗಸ್ಟ್ 15 ರಂದು ಹತ್ತು ಸಾವಿರ ಜನವಸತಿಗಳಲ್ಲಿ ಶೌಚಾಲಯ ನಿರ್ಮಿಸಿ ಬಯಲು ಬಹಿರ್ದಶೆ ಮುಕ್ತ ಜನವಸತಿ ಪ್ರದೇಶ ಎಂದು ಘೋಷಿಸಲಾಗುವುದು ಎಂದು ಶ್ರೀ ಹೆಚ್. ಕೆ. ಪಾಟೀಲ್ ಅವರು ತಿಳಿಸಿದರು.

ಮುಂದಿನ ವರ್ಷ ಅಕ್ಟೋಬರ್ 2 ರಂದು 20,000 ಜನವಸತಿ ಪ್ರದೇಶಗಳಲ್ಲಿ ಶೌಚಾಲಯ ನಿರ್ಮಿಸಿ ಅವುಗಳನ್ನು ಬಯಲು ಬಹಿರ್ದಶೆ ಮುಕ್ತ ಗ್ರಾಮಗಳಾಗಿ ಪರಿವರ್ತಿಸಲಾಗುವುದು ಎಂದು ಸಚಿವರು ನುಡಿದರು. ಈಗಾಗಲೇ ಈ ಕಾರ್ಯಕ್ರಮದ ಅನ್ವಯ ಶೌಚಾಲಯ ನಿರ್ಮಿಸಿಕೊಳ್ಳುವ ಜಾಗೃತಿ ಕಾರ್ಯಕ್ರಮಕ್ಕೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಈ ದಿನದವರೆಗೆ 5,02,403 ಶೌಚಾಲಯಗಳನ್ನು ನಿರ್ಮಿಸುವ ಅನುಮತಿ ಪತ್ರಗಳನ್ನು ಬಿಡುಗಡೆ ಮಾಡಲಾಗಿದೆ ಎಂದರು.

ಕರ್ನಾಟಕ ಸೇರಿದಂತೆ ಅನೇಕ ರಾಜ್ಯಗಳು ವೈಯುಕ್ತಿಕ ಶೌಚಾಲಯ ನಿರ್ಮಿಸಲು ನಿಗದಿಪಡಿಸಿರುವ ಮೊತ್ತವನ್ನು ಹೆಚ್ಚಿಸುವಂತೆ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶ್ರೀ ನಿತಿನ್ ಗಡ್ಕರಿ ಅವರನ್ನು ಒತ್ತಾಯಿಸಿರುವುದರಿಂದ ಆ ಮೊತ್ತವನ್ನೂ 10,100 ರೂ ನಿಂದ 12,000ರೂ ಗಳಿಗೆ ಹೆಚ್ಚಿಸಲು ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಸಮ್ಮತಿಸಿ ಸೂಚಿಸಿದೆ ಎಂದು ವಿವರಿಸಿದರು.

<u>ಚುನಾವಣೆ ಮುಂದೂಡಿಕೆ ಇಲ್ಲ</u>

ಗ್ರಾಮ ಪಂಚಾಯತ್‌ಗಳ ಪುನರ್ವಿಂಗಡನೆ ಕುರಿತಂತೆ ನಂಜಯ್ಯನಮಠ ನೇತೃತ್ವದ ಸಮಿತಿ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ, ಶೀಘ್ರದಲ್ಲಿಯೇ ತನ್ನ ಅಂತಿಮ ವರದಿಯನ್ನು ಸಲ್ಲಿಸಲಿದೆ. ವರದಿ ಬಂದ ನಂತರ, ರಾಜ್ಯ ಸಚಿವ ಸಂಪುಟ ವರದಿಯನ್ನು ಪರಿಶೀಲಿಸಿ ಸೂಕ್ತ ನಿರ್ಧಾರವನ್ನು ಪ್ರಕಟಿಸಲಿದೆ. ಮುಂದಿನ ಮೇ ಮಾಸಾಂತ್ಯಕ್ಕೆ ಪಂಚಾಯತ್ ಸಂಸ್ಥೆಗಳ ಅಧಿಕಾರಾವಧಿ ಪೂರ್ಣಗೊಳ್ಳಲಿದೆ. ನಿಗದಿತ ವೇಳೆಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಬದ್ಧವಾಗಿದೆ. ಯಾವುದೇ ಕಾರಣಕ್ಕೂ ಚುನಾವಣೆ ಮುಂದೂಡುವ ಪ್ರಸ್ತಾವ ಸರ್ಕಾರದಲ್ಲಿಲ್ಲ ಎಂದು ಶ್ರೀ ಹೆಚ್. ಕೆ. ಪಾಟೀಲ್ ಅವರು ಸ್ಪಷ್ಟಪಡಿಸಿದರು.

ರಾಜ್ಯ ಚುನಾವಣಾ ಆಯುಕ್ತರ ನೇಮಕ ವಿಚಾರವನ್ನು ಸರ್ಕಾರ ಸಧ್ಯದಲ್ಲಿಯೇ ತೀರ್ಮಾನಿಸಲಿದೆ. ಹಿಂದಿನ ಆಯುಕ್ತರು ಪಂಚಾಯತ್ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೀಸಲಾತಿ ಪಟ್ಟಿ ಪ್ರಕಟಿಸುವ ಅಧಿಕಾರವನ್ನು ರಾಜ್ಯ ಚುನಾವಣಾ ಆಯುಕ್ತರಿಗೇ ನೀಡಬೇಕೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿದ್ದರು. ಈ ಬಗ್ಗೆಯೂ ಸಾಧಕ–ಬಾಧಕಗಳನ್ನು ಪರಿಶೀಲಿಸಿ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಲಿದೆ ಎಂದು ಅವರು ಹೇಳಿದರು.

<u>ಅಧಿಕಾರಿ ಅಮಾನತ್ತು</u>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಾಜರಾಜೇಶ್ವರಿ ನಗರದ ಸಹಾಯಕ ಕಾರ್ಯಪಾಲಕ ಅಭಿಯಂತ ಶ್ರೀ ಜೆ. ಎಂ. ಚಂದ್ರನಾಥ್ ಅವರು ಹಿರಿಯ ಅಧಿಕಾರಿಗಳ ಗಮನಕ್ಕೆ ಬಾರದಂತೆ ನಿಯಮಬಾಹಿರವಾಗಿ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ ಹೆಸರಿನಲ್ಲಿ 96 ಕೋಟಿ ರೂ ಕಾಮಗಾರಿಗಳಿಗೆ ಚಾಲನೆ ನೀಡಿದ್ದಾರೆ. ಈ ಅಕ್ರಮ ಎಸಗಿರುವ ಹಿನ್ನೆಲೆಯಲ್ಲಿ ಶ್ರೀ ಜೆ. ಎಂ. ಚಂದ್ರನಾಥ್ ಅವರನ್ನು ಸೇವೆಯಿಂದ ಅಮಾನತ್ತಿನಲ್ಲಿರಿಸಿ ಅವರ ವಿರುದ್ಧ ಕ್ರಿಮಿನಲ್ ಮೊಕ್ಕದ್ದಮೆ ಹೂಡಲು ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

<u>ಕಾನೂನಿಗೆ ಗೌರವ ತರುವ ಸುದಿನ</u>

ತಮಿಳುನಾಡು ಮುಖ್ಯಮಂತ್ರಿ ಡಾ ಜೆ. ಜಯಲಿಲತಾ ಅವರ ವಿರುದ್ಧ ಬೆಂಗಳೂರಿನ ವಿಶೇಷ ನ್ಯಾಯಾಲಯ ನೀಡಿರುವ ಮಹತ್ವದ ತೀರ್ಪು ಕಾನೂನಿನ ಬಗ್ಗೆ ಗೌರವ ತರುವ ಸುದಿನವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶ್ರೀ ಹೆಚ್. ಕೆ. ಪಾಟೀಲ್ ಅವರು ಪ್ರತಿಕ್ರಿಯಿಸಿದ್ದಾರೆ.

ತಮ್ಮ ಅಧಿಕಾರಾವಧಿಯಲ್ಲಿಯೇ ಬೆಂಗಳೂರಿನಲ್ಲಿ ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡಿದ ಸಂದರ್ಭದಲ್ಲಿ ತಮ್ಮ ಸಕ್ರಿಯ ಪಾತ್ರ ಕುರಿತ ಅನುಭವಗಳ ನೆನಪುಗಳನ್ನು ಮೆಲುಕು ಹಾಕಿದ ಅವರ ರಾಷ್ಟ್ರದ ಕಾನೂನುಗಳು ಬಲವಾಗಿವೆ. ರಾಜಕೀಯದಲ್ಲಿ ಎಷ್ಟೇ ಪ್ರಭಾವಿಯಾಗಿದ್ದರೂ, ಅಕ್ರಮಗಳನ್ನು ಕಾನೂನು ಸಹಿಸುವುದಿಲ್ಲ ಎಂದು ಈ ತೀರ್ಪು ಸಾಬೀತುಪಡಿಸಿದೆ. ಭ್ರಷ್ಟರಿಗೆ ಅಂಜಿಕೆ ಮತ್ತು ಭಯ ಹುಟ್ಟಿಸುವ ನಿರ್ಣಯ ಪ್ರಕಟವಾಗಿದೆ ಎಂದರು.

ನ್ಯಾಯಾಲಯಗಳ, ಅದರಲ್ಲಿಯೂ ವಿಶೇಷ ನ್ಯಾಯಾಲಯಗಳ, ಗೌರವವನ್ನು ಹೆಚ್ಚಿಸುವ ತೀರ್ಪು ಇದಾಗಿದೆ ಎಂದು ಸಚಿವರು ತಿಳಿಸಿದರು.

***********

ಡಿ ಪಿ ಎಂ